ಬೆಂಗಳೂರು
ನಗರ ವಿಶ್ವವಿದ್ಯಾನಿಲಯ

ಆಗು ನೀ ಅನಿಕೇತನ
BE BOUNDLESS

**BENGALURU
CITY UNIVERSITY**

**Office of the Registrar(Evaluation), Central College Campus, Dr. B.R AmbedkarVeedhi, Bengaluru – 560 001.E-mail: registrarevlubcu@gmail.com, Ph.No.080-22295559**

---

**ಸಂಖ್ಯೆ:ಬೆಂ.ನ.ವಿ/ಪ.ವಿ/01/ 2023–24** | **ದಿನಾಂಕ: 20.07.2023**

# ಸುತ್ತೋಲೆ

ಬೆಂಗಳೂರು ನಗರ ವಿಶ್ವವಿದ್ಯಾನಿಲಯದಲ್ಲಿ ವಿವಿಧ ಕೋರ್ಸುಗಳ ಅಂತಿಮ ಸೆಮಿಸ್ಟರ್ ಪರೀಕ್ಷಾ ಶುಲ್ಕ ಪಾವತಿಸುವ ಸಮಯದಲ್ಲೇ ಘಟಿಕೋತ್ಸವ ಶುಲ್ಕವನ್ನು ಪಡೆಯಲಾಗುತ್ತಿತ್ತು. ಆದರೆ ಈಗ ಚಾಲ್ತಿಯಲ್ಲಿರುವ UUCMS ಪೋರ್ಟಲ್‌ನಲ್ಲಿ ಇದಕ್ಕೆ ಅವಕಾಶ ಕಲ್ಪಿಸದಿರುವ ಹಿನ್ನಲೆಯಲ್ಲಿ 2023–24 ರ ಶೈಕ್ಷಣಿಕ ವರ್ಷದಲ್ಲಿ ವ್ಯಾಸಂಗ ಮಾಡುತ್ತಿದ್ದು, ಅಂತಿಮ ಸೆಮಿಸ್ಟರ್‌ಗಳಲ್ಲಿ ವಿದ್ಯಾರ್ಥಿಗಳು ಘಟಿಕೋತ್ಸವ ಶುಲ್ಕವನ್ನು ವಿಶ್ವವಿದ್ಯಾಲಯ ಘಟಿಕೋತ್ಸವಕ್ಕೆ ಅರ್ಜಿ ಆಹ್ವಾನಿಸಿದಾಗ ವಿಶ್ವವಿದ್ಯಾಲಯ ಪೋರ್ಟಲ್‌ನಲ್ಲಿ ಶುಲ್ಕ ಪಾವತಿಸಬೇಕಾಗಿರುತ್ತದೆ. ಆದರೆ ಕೆಲವು ಬಿ.ಎಡ್ ಕಾಲೇಜುಗಳ ಪ್ರಾಂಶುಪಾಲರು ಮೌಖಿಕವಾಗಿ ಕುಲಸಚಿವರು (ಮೌಲ್ಯಮಾಪನ) ಅವರನ್ನು ಸಂಪರ್ಕಿಸಿ ಬಿ.ಎಡ್ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಹೊರ ಊರುಗಳ ಮತ್ತು ರಾಜ್ಯಗಳಿಂದ ಬಂದವರಾಗಿರುತ್ತಾರೆ ಆದುದರಿಂದ, ಆ ವಿದ್ಯಾರ್ಥಿಗಳು ವಿಶ್ವವಿದ್ಯಾಲಯ ಘಟಿಕೋತ್ಸವಕ್ಕೆ ಅರ್ಜಿ ಆಹ್ವಾನಿಸಿದಾಗ ಪಾವತಿ ಮಾಡಲು ಕಷ್ಟವಾಗಬಹುದೆಂದು ತಿಳಿಸಿ ಇದಕ್ಕೆ ಪರ್ಯಾಯ ವ್ಯವಸ್ಥೆ ಮಾಡುವಂತೆ ಮನವಿ ಮಾಡಿರುತ್ತಾರೆ.

ಬಿ.ಎಡ್ ಕಾಲೇಜುಗಳ ಪ್ರಾಂಶುಪಾಲರ ಮನವಿಯನ್ನು ಪರಿಗಣಿಸಿ ಎಲ್ಲಾ ಬಿ.ಎಡ್ ಮತ್ತು ಸ್ನಾತಕೋತ್ತರ ಕೋರ್ಸುಗಳನ್ನು ನಡೆಸುತ್ತಿರುವ ಕಾಲೇಜುಗಳ ಮುಖ್ಯಸ್ಥರು ಅಂತಿಮ ಸೆಮಿಸ್ಟರ್‌ನಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಂದ ಘಟಿಕೋತ್ಸವ ಶುಲ್ಕವನ್ನು ಪಡೆದು ಪೂರ್ಣ ವಿವರಗಳೊಂದಿಗೆ ಪೂರ್ತಿ ಶುಲ್ಕ ಮೊತ್ತವನ್ನು ಹಣಕಾಸು ಅಧಿಕಾರಿಗಳ ಹೆಸರಿನಲ್ಲಿ ಡಿ.ಡಿ (Demand Draft )ಅನ್ನು ಪಡೆದು ಕುಲಸಚಿವರು (ಮೌಲ್ಯಮಾಪನ) ಅವರ ಕಛೇರಿಗೆ ತಲುಪಿಸಲು ತಿಳಿಸಲಾಗಿದೆ. ಹಾಗೂ ವಿಶ್ವವಿದ್ಯಾಲಯ ಘಟಿಕೋತ್ಸವಕ್ಕೆ ಅರ್ಜಿಯನ್ನು ಕರೆದಾಗ ಆಯಾ ಕಾಲೇಜುಗಳ ಪ್ರಾಂಶುಪಾಲರು/ಮುಖ್ಯಸ್ಥರು ಎಲ್ಲಾ ವಿದ್ಯಾರ್ಥಿಗಳ ವಿವರಗಳನ್ನು UUCMS ಪೋರ್ಟಲ್‌ನಲ್ಲಿ ಅಪ್ಲೋಡ್ ಮಾಡುವುದು ಅವರ ಜವಬ್ದಾರಿಯಾಗಿರುತ್ತದೆ. ಒಂದು ವೇಳೆ ಯಾವುದೇ ವಿದ್ಯಾರ್ಥಿಯ ಹೆಸರು ಶುಲ್ಕದ ವಿವರ ಇತ್ಯಾದಿ ದಾಖಲೆಗಳನ್ನು ಅಪ್ಲೋಡ್ ಮಾಡದಿದ್ದರೆ ಆಯಾ ಕಾಲೇಜುಗಳ ಪ್ರಾಂಶುಪಾಲರೇ ಹೊಣೆಗಾರರಾಗಿರುತ್ತಾರೆ.

Lok...

**ಕುಲಸಚಿವರು (ಮೌಲ್ಯಮಾಪನ)**

ಕುಲಸಚಿವರು (ಮೌಲ್ಯಮಾಪನ)
ಬೆಂಗಳೂರು ನಗರ ವಿಶ್ವವಿದ್ಯಾನಿಲಯ
ಸೆಂಟ್ರಲ್ ಕಾಲೇಜು ಕ್ಯಾಂಪಸ್
ಬೆಂಗಳೂರು – 560 001